For more job news visit : www.kpscvaani.com

ಜಿಲ್ಲಾ ನಗರಾಭಿವೃದ್ಧಿ ಕೋಶ,
ಜಿಲ್ಲಾಧಿಕಾರಿಯವರ ಕಾರ್ಯಾಲಯ,
ತುಮಕೂರು ಜಿಲ್ಲೆ, ತುಮಕೂರು.

ಕರ್ನಾಟಕ ಸರ್ಕಾರ

ದೂರವಾಣಿ ಸಂ::0816-2955247
Email : ka.tumakuru.dudc@gmail.com
Website:www.tumakurududc.mrc.gov.in
2ನೇ ಮಹಡಿ, ರೂಂ ನಂ.211 ಮಿನಿ
ವಿಧಾನಸೌಧ, ತುಮಕೂರು- 572101.

**ಸಂ:ಡಿಯುಡಿಸಿ/ಸಿಬ್ಬಂದಿ/ಸಿಆರ್/242/2025-26** **ದಿನಾಂಕ:೨೩-03-2026**

## "ನೇಮಕಾತಿ ಅಧಿಸೂಚನೆ"

**ವಿಷಯ:** ತುಮಕೂರು ಮಹಾನಗರಪಾಲಿಕೆ, ಶಿರಾ ಮತ್ತು ತಿಪಟೂರು ನಗರಸಭೆಯಲ್ಲಿ ನೇರಪಾವತಿಯಡಿ ಖಾಲಿ ಇರುವ ಪೌರಕಾರ್ಮಿಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಪತ್ರ ಸಂಖ್ಯೆ:ನಅಇ 108 ಜಿಇಎಲ್ 2021(ಇ) ದಿನಾಂಕ:07.08.2025 ಹಾಗೂ 12.11.2025.
2. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಇವರ ಸುತ್ತೋಲೆ ಸಂಖ್ಯೆ: 513641/ DMA/ EST2/ OTH/ 8/ 2021 ದಿನಾಂಕ:18-11-2025

*****

ವಿಷಯಕ್ಕೆ ಸಂಬಂಧಿಸಿದಂತೆ, ಪೌರಸೇವಾ ವೃಂದ ಮತ್ತು ನೇಮಕಾತಿ ನಿಯಮ 2010 ಮತ್ತು ಮಹಾನಗರಪಾಲಿಕೆಗಳ ವೃಂದ ಮತ್ತು ನೇಮಕಾತಿ ನಿಯಮ 2011ರ ರೀತ್ಯಾ ಮಹಾನಗರಪಾಲಿಕೆ ಮತ್ತು ನಗರಸಭೆಗಳಲ್ಲಿ ಶೇ.50ರಷ್ಟು ಪೌರಕಾರ್ಮಿಕರನ್ನು ನೇರ ನೇಮಕಾತಿ ಮೂಲಕ ಹಾಗೂ ಶೇ.50 ರಷ್ಟು ಪೌರಕಾರ್ಮಿಕರನ್ನು ನೇರಪಾವತಿ ಮೂಲಕ ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖಿತ ಪತ್ರ ಮತ್ತು ಸುತ್ತೋಲೆಗಳಂತೆ ಮಾರ್ಗಸೂಚಿಗಳನ್ನು ಅನುಸರಿಸಿ ಮಹಾನಗರಪಾಲಿಕೆ ಮತ್ತು ನಗರಸಭೆಯಲ್ಲಿ ನೇರಪಾವತಿಯಡಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯ ಮೂಲಕ ಕ್ರಮವಹಿಸಲು ಸೂಚಿಸಲಾಗಿರುತ್ತದೆ.

ಅದರಂತೆ ಕೆಳಕಂಡ ಪಟ್ಟಿಯಲ್ಲಿ ವಿವರಿಸಿರುವಂತೆ ತುಮಕೂರು ಮಹಾನಗರಪಾಲಿಕೆ, ಶಿರಾ ಮತ್ತು ತಿಪಟೂರು ನಗರಸಭೆಯಲ್ಲಿ ನೇರಪಾವತಿಯಡಿ ಖಾಲಿ ಇರುವ ಪೌರಕಾರ್ಮಿಕ ಹುದ್ದೆಗಳನ್ನು ಭರ್ತಿ ಮಾಡಲು, ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ದಿನಾಂಕ:೨೫-೦೩-೨೦೨೬ರಿಂದ ದಿನಾಂಕ:೦೮-೦೪-೨೦೨೬ ರವರೆಗೆ, ಸಂಬಂಧಪಟ್ಟ ಮಹಾನಗರಪಾಲಿಕೆ/ ನಗರಸಭೆ ಕಚೇರಿಗಳಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು, ದಿನಾಂಕ:೦೯-೦೪-೨೦೨೬ ರ ಸಂಜೆ 5.00 ಗಂಟೆಯೊಳಗೆ ಆಯಾ ಕಚೇರಿಗೆ ಸಲ್ಲಿಸತಕ್ಕದ್ದು.

| ಕ್ರ.ಸಂ | ನಗರ ಸ್ಥಳೀಯ ಸಂಸ್ಥೆಯ ಹೆಸರು | ಹುದ್ದೆಗಳ ಸಂಖ್ಯೆ |
|---|---|---|
| 01 | ತುಮಕೂರು ಮಹಾನಗರಪಾಲಿಕೆ | 175 |
| 02 | ತಿಪಟೂರು ನಗರಸಭೆ | 24 |
| 03 | ಶಿರಾ ನಗರಸಭೆ | 39 |

**ವಿಶೇಷ ಸೂಚನೆ:**

1. ಅಧಿಸೂಚನೆಯನ್ನು ಜಿಲ್ಲಾ ನಗರಾಭಿವೃದ್ಧಿ ಕೋಶದ ವೆಬ್‌ಸೈಟ್ www.tumakurududc.mrc.gov.in ನಲ್ಲಿ ಹಾಗೂ ಆಯಾ ಕಚೇರಿಗಳ ಸೂಚನಾ ಫಲಕದಲ್ಲಿ ವೀಕ್ಷಿಸಬಹುದು.
2. ಈ ನೇಮಕಾತಿಯು ಸರ್ಕಾರ/ಪೌರಾಡಳಿತ ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಆದೇಶ ಮತ್ತು ಸುತ್ತೋಲೆಗಳ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿದೆ

For more job news visit : www.kpscvaani.com

1. **ಅರ್ಜಿ ಸಲ್ಲಿಕೆ ವಿಧಾನ ಮತ್ತು ಸ್ವೀಕೃತಿ ಕಾಲಮಿತಿ:**

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ | 25-03-2026 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 08-04-2026 |

- ಯಾವುದೇ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಬಾರಿ ಅರ್ಜಿ ಸಲ್ಲಿಸಿದಲ್ಲಿ, ಒಂದು ಅರ್ಜಿಯನ್ನು ಪರಿಗಣಿಸಿ ಉಳಿದಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು,
- ಅರ್ಜಿಗಳನ್ನು ಖುದ್ದಾಗಿ ತುಮಕೂರು ಮಹಾನಗರ ಪಾಲಿಕೆ/ನಗರಸಭೆ, ತಿಪಟೂರು/ಶಿರಾ ಕಛೇರಿಗಳಲ್ಲಿ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಪ್ರಕಟಣೆಯಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸುವುದಲ್ಲದೇ ಅಂತಹವರ ವಿರುದ್ಧ ಕಾನೂನಿನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

**ವಿಶೇಷ ಸೂಚನೆ :**

- ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಸಾರ್ವಜನಿಕ ಪ್ರಕಟಣೆಯಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳುವುದು,
- ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಯಾವುದಾದರೂ ಅನುಮಾನಗಳಿದ್ದಲ್ಲಿ ಬೆಳಿಗ್ಗೆ 10-00 ಗಂಟೆಯಿಂದ ಸಂಜೆ 5-30 ಗಂಟೆಯವರೆಗೆ ಜಿಲ್ಲಾ ನಗಾಭಿವೃದ್ಧಿ ಕೋಶದ ಕಚೇರಿಯ ಆಡಳಿತ ಶಾಖೆಯನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸುವುದು.

2. **ಅರ್ಹತಾ ಷರತ್ತುಗಳು:**

I. ಭಾರತೀಯ ನಾಗರಿಕನಾಗಿರತಕ್ಕದ್ದು.

II. ಈ ಸಾರ್ವಜನಿಕ ಪ್ರಕಟಣೆ ಪ್ರಕಟಗೊಂಡ ದಿನಾಂಕಕ್ಕೆ ಕನಿಷ್ಠ ವಯೋಮಿತಿ 18 ಗರಿಷ್ಠ ವಯೋಮಿತಿ 50 ವರ್ಷಗಳನ್ನು ಮೀರಿರಬಾರದು. (ಕಡ್ಡಾಯವಾಗಿ ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ ಮತ್ತು ಈಗಾಗಲೇ ಕಾರ್ಯ ನಿರ್ವಹಿಸುತ್ತಿರುವ ಸಂಸ್ಥೆಯಲ್ಲಿ ESI, PF ನಲ್ಲಿ ನಮೂದಿಸಿರುವ ಜನ್ಮದಿನಾಂಕ ದಾಖಲೆಯನ್ನು ಪರಿಗಣಿಸಲಾಗುವುದು.)

III. ಸಂಬಂಧಪಟ್ಟ ಸ್ಥಳಿಯ ಸಂಸ್ಥೆಯಲ್ಲಿ ಹಾಲಿ ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕ, ಲೋಡರ್ಸ್, ಯುಜಿಡಿ ಹೆಲ್ಪರ್ಸ್, ಕ್ಲೀನರ್ಸ್, ಹೆಲ್ಪರ್ಸ್, ತ್ಯಾಜ್ಯ ಸಂಸ್ಕರಣ ಘಟಕ, ಸಾರ್ವಜನಿಕ ಶೌಚಾಲಯ, ಶೂನ್ಯ ತ್ಯಾಜ್ಯ ನಿರ್ವಹಣೆ ಘಟಕದ ಸ್ಥಳೀಯ ಸ್ವಚ್ಛತಾ ಕೆಲಸಗಾರರಾಗಿರಬೇಕು(ESI ಮತ್ತು PF ಸೌಲಭ್ಯವನ್ನು ಹೊಂದಿರಬೇಕು)

IV. ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಪೌರಕಾರ್ಮಿಕರಾಗಿ ಕಾರ್ಯನಿರ್ವಹಿಸುವಾಗ ಕೋವಿಡ್-19ರ ಸಾಂಕ್ರಾಮಿಕ ರೋಗಕ್ಕೆ ಅಥವಾ ಇತರೆ ಕಾರಣಗಳಿಂದ ಮರಣ ಹೊಂದಿದ ಪೌರಕಾರ್ಮಿಕದ ಕುಟುಂಬದ ಸದಸ್ಯರಾಗಿರಬೇಕು.

V. ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಅಧಿನಿಯಮದಡಿ ಗುರುತಿಸಲ್ಪಟ್ಟ ಸಂತ್ರಸ್ಥರು ಅಥವಾ ಕುಟುಂಬದ ಸದಸ್ಯರಾಗಿರಬೇಕು.

VI. ಕನ್ನಡ ಭಾಷೆ ಮಾತನಾಡುವ ಬಗ್ಗೆ ಜ್ಞಾನವಿರಬೇಕು. (ಕನ್ನಡ ಜ್ಞಾನದ ಬಗ್ಗೆ ಸ್ವಯಂ ಘೋಷಣಾ ಪತ್ರ ಲಗತ್ತಿಸಬೇಕು).

VII. ಯಾವುದೇ ಕ್ರಿಮಿನಲ್ ಪ್ರಕರಣದಲ್ಲಿ ಭಾಗಿಯಾಗಿರಬಾರದು.

VIII. ಈಗಾಗಲೇ ಯಾವುದೇ ಕಚೇರಿಯಲ್ಲಿ ಶಿಸ್ತುಕ್ರಮಕ್ಕೆ ಒಳಗಾಗಿ ಸೇವೆಯಿಂದ ವಜಾಗೊಂಡಿರಬಾರದು.

For more job news visit : www.kpscvaani.com

3. <u>ನೇಮಕಾತಿ ವಿಧಾನ:</u>

I. ಈ ಸಾರ್ವಜನಿಕ ಪ್ರಕಟಣೆ ಪ್ರಕಟಗೊಂಡ ಪ್ರಾರಂಭದ ದಿನಾಂಕಕ್ಕೆ ಮುಂಚೆ ಸಂಬಂಧಪಟ್ಟ ಸ್ಥಳಿಯ ಸಂಸ್ಥೆಯಲ್ಲಿ ಹಾಲಿ ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಕನಿಷ್ಠ ಒಂದು ವರ್ಷ ಪೌರಕಾರ್ಮಿಕ, ಲೋಡರ್ಸ್, ಯುಜಿಡಿ ಹೆಲ್ಪರ್ಸ್, ಕ್ಲೀನರ್ಸ್, ಹೆಲ್ಪರ್ಸ್, ತ್ಯಾಜ್ಯ ಸಂಸ್ಕರಣ ಘಟಕ, ಸಾರ್ವಜನಿಕ ಶೌಚಾಲಯ, ಶೂನ್ಯ ತ್ಯಾಜ್ಯ ನಿರ್ವಹಣೆ ಘಟಕದ ಸ್ಥಳೀಯ ಸ್ವಚ್ಛತಾ ಕೆಲಸಗಾರರಾಗಿರಬೇಕು(ESI ಮತ್ತು PF ಸೌಲಭ್ಯವನ್ನು ಹೊಂದಿರಬೇಕು ಮತ್ತು ಸಕ್ಷಮ ಪ್ರಾಧಿಕಾರದಿಂದ ದೃಢೀಕರಣ ಪಡೆದಿರಬೇಕು)

II. ಹೊರಗುತ್ತಿಗೆ/ ದಿನಗೂಲಿ/ ಗುತ್ತಿಗೆ ಆಧಾರದ ಮೇಲೆ ಪೌರಕಾರ್ಮಿಕರಾಗಿ ಕಾರ್ಯನಿರ್ವಹಿಸುವಾಗ ಕೋವಿಡ್-19ರ ಸಾಂಕ್ರಾಮಿಕ ರೋಗಕ್ಕೆ ಅಥವಾ ಇತರೆ ಕಾರಣಗಳಿಂದ ಮರಣ ಹೊಂದಿದ ಪೌರಕಾರ್ಮಿಕದ ಕುಟುಂಬದ ಸದಸ್ಯರಾಗಿರಬೇಕು.(ಸಕ್ಷಮ ಪ್ರಾಧಿಕಾರದಿಂದ ದೃಢೀಕರಣ ಪಡೆದಿರಬೇಕು)

III. ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಅಧಿನಿಯಮದಡಿ ಗುರುತಿಸಲ್ಪಟ್ಟ ಸಂತ್ರಸ್ಥರು ಅಥವಾ ಕುಟುಂಬದ ಸದಸ್ಯರಾಗಿರಬೇಕು. .(ಸಕ್ಷಮ ಪ್ರಾಧಿಕಾರದಿಂದ ದೃಢೀಕರಣ ಪಡೆದಿರಬೇಕು)

IV. ನೇರ ಪಾವತಿಯಡಿ ನೇಮಕಾತಿ ಮಾಡಿಕೊಳ್ಳುವ ಪದ್ಧತಿ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಹಿಂದುಳಿದ ವರ್ಗಗಳ(ನೇಮಕಾತಿ ಮುಂತಾದವುಗಳ ಮೀಸಲಾತಿ) ಅಧಿನಿಯಮದಲ್ಲಿ ಉಲ್ಲೇಖಿಸಿರುವುದಿಲ್ಲ. ಆದ ಕಾರಣ ನೇರಪಾವತಿ ನೇಮಕಾತಿ ಪ್ರಕ್ರಿಯೆಯು ಸದರಿ ಅಧಿನಿಯಮಕ್ಕೆ ಒಳಪಟ್ಟಿರುವುದಿಲ್ಲಮತ್ತು ಮೀಸಲಾತಿ ಅನ್ವಯಿಸುವುದಿಲ್ಲ.

V. ಸದರಿ ನೇರಪಾವತಿ ಪೌರಕಾರ್ಮಿಕರ ಹುದ್ದೆಗಳ ನೇಮಕಾತಿಯು ಸರ್ಕಾರ ಮತ್ತು ಪೌರಾಡಳಿತ ನಿರ್ದೇಶನಾಲಯದಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಸುತ್ತೋಲೆಗಳು, ಆದೇಶಗಳು ಮತ್ತು ನಿರ್ದೇಶನಗಳ ಷರತ್ತುಗಳಿಗೆ ಒಳಪಟ್ಟಿರುತ್ತದೆ.

4. <u>ನೇಮಕಾತಿ ಷರತ್ತುಗಳು:</u>

I. ನೇರ ಪಾವತಿಯಡಿ ಆಯ್ಕೆಗೊಂಡ ಪೌರಕಾರ್ಮಿಕರು ತಾತ್ಕಾಲಿಕವಾಗಿ ನೇಮಕವಾಗಿದ್ದು ಖಾಯಂ ನೌಕರರಿಗೆ ನೀಡುವಂತಹ ಇತರೆ ಯಾವುದೇ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ ಮತ್ತು ವ್ಯಕ್ತಿಗತವಾಗಿ ಅಥವಾ ಸಂಘಗಳನ್ನು ಸ್ಥಾಪಿಸಿಕೊಂಡು ಖಾಯಂ ಮಾಡುವಂತೆ ಒತ್ತಾಯಿಸುವಂತಿಲ್ಲ ಹಾಗೂ ಖಾಯಂ ಮಾಡುವಂತೆ ಯಾವುದೇ ನ್ಯಾಯಾಲಯದ ಮೊರೆ ಹೋಗುವುದಕ್ಕೆ ಆಸ್ಪದವಿರುವುದಿಲ್ಲ. (ಈ ಕುರಿತು ಆಯ್ಕೆಗೊಂಡ ಅಭ್ಯರ್ಥಿಗಳು ನೋಟರಿ ಅಫೀಡಿವಿಟ್ ಕಡ್ಡಾಯವಾಗಿ ನೀಡತಕ್ಕದ್ದು)

II. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.(ಈ ಕುರಿತು ವೈದ್ಯಾಧಿಕಾರಿಗಳಿಂದ ವೈದ್ಯಕೀಯ ದೃಢೀಕರಣ ಪತ್ರ ನೀಡುವುದು)

III. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಆಯ್ಕೆ ಸಮಿತಿ ಕಾಯ್ದಿರಿಸಿಕೊಂಡಿದೆ ಮತ್ತು ಆಯ್ಕೆ ಸಮಿತಿ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

IV. ನೇರಪಾವತಿಯಡಿ ಆಯ್ಕೆ ಹೊಂದುವವರು ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಮೃತರಾದಲ್ಲಿ ಅನುಕಂಪ ನೇಮಕಾತಿ ಪಿಂಚಣಿ ಉಪದಾನ ಇತ್ಯಾದಿ ಯಾವುದೇ ಸೇವಾ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ.

For more job news visit : www.kpscvaani.com

V. ನೇರ ಪಾವತಿ ಅಡಿ ಆಯ್ಕೆ ಹೊಂದುವ ಪೌರಕಾರ್ಮಿಕರು ಸ್ವಚ್ಛತಾ ಕೆಲಸವನ್ನೇ ನಿರ್ವಹಿಸಬೇಕು ಅದಲ್ಲದೆ ಇತರೆ ಯಾವುದೇ ಕೆಲಸಕ್ಕೆ ಅಥವಾ ಕಚೇರಿ ಕೆಲಸಗಳಿಗೆ ನಿಯೋಜಿಸುವಂತೆ ಕೋರುವಂತಿಲ್ಲ.

VI. ನೇರ ಪಾವತಿಯಡಿ ಆಯ್ಕೆಗೊಂಡವರುಗಳ ಹೊರತು ಸದರಿಯವರ ಹೆಸರಿನಲ್ಲಿ ಯಾವುದೇ ಸಂದರ್ಭದಲ್ಲಿಯೂ ಬೇರೊಬ್ಬರು ಕರ್ತವ್ಯ ನಿರ್ವಹಿಸುವಂತಿಲ್ಲ.

VII. ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ವಾಸ್ತವಿಕ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಮಾಹಿತಿಯನ್ನು ಮರೆಮಾಚಿರುವನೆಂದು, ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದಾದಲ್ಲಿ, ಕರ್ತವ್ಯ ನಿರ್ವಹಣೆಯಲ್ಲಿ ವಿಫಲರಾದಲ್ಲಿ ಅಥವಾ ಕಚೇರಿ ಮುಖ್ಯಸ್ಥರು ನೀಡುವ ಸೂಚನೆ ಮತ್ತು ಸಲಹೆಗಳನ್ನು ಪಾಲಿಸದೆ ಇದ್ದಲ್ಲಿ ಸಂಬಂಧಿಸಿದ ಆಯುಕ್ತರು/ಪೌರಾಯುಕ್ತರ ಮುಖಾಂತರ ಯಾವುದೇ ಮುನ್ಸೂಚನೆ ನೀಡದೆ ಸದರಿಯವರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಿ ಸೂಕ್ತ ಕಾನೂನು ರೀತ್ಯಾ ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.

1. ಈ ಸಾರ್ವಜನಿಕ ಪ್ರಕಟಣೆಯನ್ನುಯ ಅಧಿಕೃತ ವೆಬ್‌ಸೈಟ್ www.tumakurududc.mrc.gov.in ನಲ್ಲಿ ಪ್ರಚುರಪಡಿಸಲಾಗಿದೆ.
2. ಈ ಸಾರ್ವಜನಿಕ ಪ್ರಕಟಣೆಯು ನೇಮಕಾತಿ ಆದೇಶವಾಗಿರುವುದಿಲ್ಲ.
3. ಪೌರಕಾರ್ಮಿಕರ ನೇರಪಾವತಿ ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇರಪಾವತಿ ಪೌರಕಾರ್ಮಿಕರ ನೇಮಕಾತಿ ಆಯ್ಕೆ ಸಮಿತಿ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು ರವರು ಕಾಯ್ದಿರಿಸಿಕೊಂಡಿರುತ್ತಾರೆ.

ಅಧ್ಯಕ್ಷರು,
ನೇರಪಾವತಿ ಪೌರಕಾರ್ಮಿಕರ ನೇಮಕಾತಿ
ಆಯ್ಕೆ ಸಮಿತಿ ಹಾಗೂ ಜಿಲ್ಲಾಧಿಕಾರಿಗಳು,,
ತುಮಕೂರು ಜಿಲ್ಲೆ, ತುಮಕೂರು.